ಸುದ್ದಿ ಸಿಂಚನ

ಸೇವಾ ಮನೋಭಾವದಿಂದ ದಸರಾ ಆಚರಿಸಿ: ಚನ್ನಬಸಪ್ಪ

ಸೊರಬ: ದಸರಾ ಸಾಂಸ್ಕೃತಿಕ ಉತ್ಸವವನ್ನು ಸೇವಾ ಮನೋಭಾವನೆ ಹಾಗೂ ನಿಸ್ವಾರ್ಥವಾಗಿ ಒಗ್ಗಟ್ಟಿನಿಂದ ಆಚರಿಸಿದರೆ ಕಾರ್ಯಕ್ರಮಗಳು ಯಶಸ್ವಿಯಾಗುವುದಕ್ಕೆ ಸಾಧ್ಯವಾಗುತ್ತದೆ ಎಂದು ಗೃಹ ಸಚಿವರ ಆಪ್ತ ಕಾರ್ಯದರ್ಶಿ ಕೆ.ಚನ್ನಬಸಪ್ಪ ಹೇಳಿದರು. ಚಂದ್ರಗುತ್ತಿ ಗ್ರಾಮದ ರೇಣುಕಾಂಬ ಕಲ್ಯಾಣ ಮಂಟಪದ ಆವರಣದಲ್ಲಿ ರೇಣುಕಾಂಬ ದೇವಿ ದಸರಾ ಉತ್ಸವ ಸಮಿತಿ, ರೇಣುಕಾಂಬ ಗ್ರಾಮೀಣ ಸೇವಾ ಸಂಸ್ಥೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮತ್ತು ಗ್ರಾಪಂ ಸಹಯೋಗದಲ್ಲಿ ನಡೆದ 9ನೇ ವರ್ಷದ ರೇಣುಕಾಂಬ ದೇವಿಯ ದಸರಾ ಉತ್ಸವದ 4ನೇ ದಿನದ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಧಾರ್ಮಿಕ ಶಕ್ತಿ ಕೇಂದ್ರವಾದ ದೇಗುಲಗಳು ಮನಸ್ಸು ಮತ್ತು ಆತ್ಮವನ್ನು ಶುದ್ಧಿ ಮಾಡುತ್ತವೆ. ನವರಾತ್ರಿಯಲ್ಲಿ ನಡೆಯುವ ದಸರಾ ಸಾಂಸ್ಕೃತಿಕ ವೈಭವವು ಮನರಂಜನೆ ನೀಡುವುದರ ಜೊತೆಗೆ ಕಲಾವಿದರನ್ನು ಪ್ರೋತ್ಸಾಹಿಸಲು ಉತ್ತಮ ವೇದಿಕೆಯಾಗಿದೆ ಎಂದು ಹೇಳಿದರು.

ದಸರಾ ಉತ್ಸವದಲ್ಲಿ ದೇವಿಯ ಆರಾಧನೆಯ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಯೋಜಿಸಿರುವುದು ಸ್ವಾಗತಾರ್ಹ ವಿಷಯವಾಗಿದೆ ಎಂದು ನುಡಿದರು. ಈ ಸಂದರ್ಭದಲ್ಲಿ ರೇಣುಕಾಂಬ ದೇವಿ ದಸರಾ ಉತ್ಸವ ಆಚರಣಾ ಸಮಿತಿ ಅಧ್ಯಕ್ಷ ಡಾ.ಆರ್.ಶ್ರೀಧರ್, ಹುಲ್ತಿಕೊಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಭೋವಿ ನಿಗಮದ ರಾಜ್ಯ ಅಧ್ಯಕ್ಷ ರವಿಕುಮಾರ್, ತಾಪಂ ಮಾಜಿ ಸದಸ್ಯ ಸುನೀಲ್ ಗೌಡ, ಪ್ರಮುಖರಾದ ಕೃಷ್ಣಣ್ಣ ಕಾಮತ್, ಉಮಾಪತಿ ನಾಯ್ಕ, ಸುಧಾಕರ್ಪಿ.ನಾಯ್ಕ, ಚಂದ್ರಪ್ಪ ಕತವಾಯಿ, ನಾರಾಯಣಪ್ಪ, ರಾಘು ಚಿಕ್ಕಮಾಕೊಪ್ಪ, ದರ್ಶನ್ ಚಿಕ್ಕಮಾಕೊಪ್ಪ, ರವಿ, ಕೆ.ಪರಮೇಶರ, ಬಲಿಂದ್ರಪ್ಪ, ಗೋಪಾಲ್ ಪೂಜಾರ್ಸೇರಿದಂತೆ ಅನೇಕರು ಇದ್ದರು.

ನೂತನ ತಹಸೀಲ್ದಾರ್ ಶಂಕರಪ್ಪಗೆ ಸನ್ಮಾನ

ಚನ್ನಗಿರಿ: ಪಟ್ಟಣದ ತಾಲೂಕು ಕಚೇರಿಯಲ್ಲಿ ನೂತನ ತಹಸೀಲ್ದಾರರಾಗಿ ಜಿ.ಎಸ್.ಶಂಕರಪ್ಪ ಅವರು ಸೋಮವಾರ ಸಂಜೆ ಅಧಿಕಾರ ಸ್ವೀಕರಿಸಿದರು. ಈ ಹಿಂದೆ ತಹಸೀಲ್ದಾರರಾಗಿದ್ದ ಎರ್ರಿಸ್ವಾಮಿ ವರ್ಗಾವಣೆಯಿಂದ ತೆರವುಗೊಂಡಿದ್ದ ಸ್ಥಾನಕ್ಕೆ ಹಾವೇರಿಯಲ್ಲಿ ತಹಸೀಲ್ದಾರರಾಗಿದ್ದ ಜಿ.ಎಸ್.ಶಂಕರಪ್ಪ ವರ್ಗಾವಾಗಿ ಬಂದಿದ್ದಾರೆ. ಮಂಗಳವಾರ ಬೆಳಗ್ಗೆ ಕನ್ನಡನಾಡು ಹಿತರಕ್ಷಣಾ ಸಮಿತಿ ಗೌರವಾಧ್ಯಕ್ಷ ಸರ್ದಾರ್, ಅಧ್ಯಕ್ಷ ಅಣ್ಣೋಜಿರಾವ್, ರೈತ ಸಂಘದ ಅಧ್ಯಕ್ಷ ರವಿಕುಮಾರ್, ಶಹದಾಬ್, ಶೋಹಿದ್, ನಯಾಜ್ ಅವರು ನೂತನ ತಹಸೀಲ್ದಾರರಿಗೆ ಗೌರವಿಸಿ, ಅಭಿನಂದಿಸಿದರು. ಈ ಸಂದರ್ಭದಲ್ಲಿ ಗ್ರೇಡ್-2 ತಹಸೀಲ್ದಾರ್ರುಕ್ಮಿಣಿಬಾಯಿ, ಶಿರಾಸ್ತೆದಾರ್ ಮೋಹನ್ ಸೇರಿದಂತೆ ಕಚೇರಿ ಸಿಬ್ಬಂದಿ ಹಾಜರಿದ್ದರು.

ಬೆಂಗ್ಳೂರು ಅಜೀಂ ಪ್ರೇಮ್‌ಜಿ ವಿವಿಯಲ್ಲಿ ನೂತನ ಡಿಪ್ಲೊಮಾ ಕೋರ್ಸ್ ಆರಂಭ

ಪತ್ರಿಕಾಗೋಷ್ಠಿಯಲ್ಲಿ ವಿಶ್ವ ವಿಶ್ವವಿದ್ಯಾಲಯದ ಉಪ ಕುಲಪತಿ ಇಂದು ಪ್ರಸಾದ್ ಮಾಹಿತಿ

• **ಕನ್ನಡಪ್ರಭ ವಾರ್ತೆ** ಶಿವಮೊಗ್ಗ

ಬೆಂಗಳೂರಿನ ಅಜೀಂ ಪ್ರೇಮ್‌ಜಿ ವಿಶ್ವವಿದ್ಯಾಲಯವು 'ಶಿಕ್ಷಣ ಶೈಕ್ಷಣಿಕ ಮೌಲ್ಯಮಾಪನ' ವಿಷಯದಲ್ಲಿ ಸ್ನಾತಕೋತ್ತರ ಡಿಪ್ಲೊಮಾ ಕೋರ್ಸ್ ಪ್ರವೇಶಾತಿ ಆರಂಭಿಸಿದೆ ಎಂದು ಅಜೀಂ ಪ್ರೇಮ್ ಜಿ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಇಂದು ಪ್ರಸಾದ್ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ವಿಷಯ ತಿಳಿಸಿದ ಅವರು, ಒಂದು ವರ್ಷದ ಈ ಅರೆಕಾಲಿಕ ಕಾರ್ಯಕ್ರಮವು ಮೌಲ್ಯಮಾಪನಗಳ ವಿಷಯದಲ್ಲಿ ತಾತ್ವಿಕ ಮತ್ತು ಪ್ರಾಯೋಗಿಕ ವಿಷಯಗಳ ಸಂತುಲಿತ ಸಂಯೋಜನೆಯಾಗಿದೆ. ಇದನ್ನು ಆನ್‌ಲೈನ್ ಮತ್ತು ಕ್ಯಾಂಪಸ್ ತರಗತಿಗಳನ್ನು ಒಳಗೊಂಡಂತೆ ಸಂಯೋಜಿತ ವಿಧಾನದಲ್ಲಿ ನೀಡಲಾಗುವುದು. ಈ ಕಾರ್ಯಕ್ರಮವು ಮೌಲ್ಯಮಾಪನದ ಸಂಸ್ಕೃತಿಯಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತರುವುದಕ್ಕಾಗಿ ಶಿಕ್ಷಕರು, ಶಿಕ್ಷಕ ಪ್ರಶಿಕ್ಷಕರು, ಶೈಕ್ಷಣಿಕ ಅಧಿಕಾರಿಗಳು ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ಇತರ ವೃತ್ತಿಪರರು ಸೇರಿದಂತೆ ಪ್ರಮುಖ ಸಹಭಾಗಿಗಳಲ್ಲಿ ಅಗತ್ಯವಿರುವ ಜ್ಞಾನ, ಕೌಶಲ್ಯ ಮತ್ತು ಮನೋಧರ್ಮವನ್ನು ಒದಗಿಸುವ ಮೂಲಕ ಅವರಲ್ಲಿ ಸಾಮರ್ಥ್ಯವನ್ನು ವೃದ್ಧಿಸುವ ಉದ್ದೇಶ ಹೊಂದಿದೆ ಎಂದರು.

ಕನಿಷ್ಠ ಎರಡು ವರ್ಷಗಳಿಂದ ಅಗತ್ಯವಾಗಿ ಶಿಕ್ಷಣ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವ ವೃತ್ತಿಪರರಿಗಾಗಿ ಈ ಕಾರ್ಯಕ್ರಮವನ್ನು ವಿನ್ಯಾಸಗೊಳಿಸಲಾಗಿದೆ. ಇವರಲ್ಲಿ ಶಿಕ್ಷಕರು, ಶೈಕ್ಷಣಿಕ ಸಂಯೋಜಕರು, ಶಿಕ್ಷಕ ಬೋಧಕರು, ಪಠ್ಯಕ್ರಮ ವಿನ್ಯಾಸಕರು, ಪ್ರಶ್ನೆ ಪತ್ರಿಕೆಯನ್ನು ಅಭಿವೃದ್ಧಿಪಡಿಸುವವರು, ಪಠ್ಯಪುಸ್ತಕದ ಲೇಖಕರು, ಶೈಕ್ಷಣಿಕ ಸಮಾಲೋಚಕರು, ಮೌಲ್ಯಮಾಪನ ವೃತ್ತಿಯವರು ಮತ್ತು ಇತರ ಯಾವುದೇ ಎನ್ ಜಿಒ ವೃತ್ತಿಪರರು ಸೇರ್ಪಡೆಯಾಗಬಹುದು ಎಂದು ಮಾಹಿತಿ ನೀಡಿದರು.

ಮೌಲ್ಯಮಾಪನದ ಪರಿಕಲ್ಪನೆಗಳು, ತತ್ವಗಳು, ವಿಧಾನಗಳು ಮತ್ತು ಶಿಕ್ಷಣದ ಗುಣಮಟ್ಟದ ಸುಧಾರಣೆಯಲ್ಲಿ ಅವರು ಹೊಂದಿರುವ ಪಾತ್ರದ ಕುರಿತು ಸಮಗ್ರ ಗ್ರಹಿಕೆ ಬೆಳೆಸಿಕೊಳ್ಳಲು ಇದು ಅನುಕೂಲವಾಗುತ್ತದೆ. ಸಾಮರ್ಥ್ಯ ಆಧರಿತ ಪ್ರಶ್ನಾಪತ್ರಿಕೆಗಳು, ಚಟುವಟಿಕೆಗಳು, ಪೋರ್ಟ್ ಫೋಲಿಯೋಗಳು, ಅಧ್ಯಾಯ ಶೀರ್ಷಿಕೆಗಳು, ಪರಿಶೀಲನಾ ಪಟ್ಟಿಗಳು, ಗುಂಪಿನ ಮೌಲ್ಯಮಾಪನಗಳು ಮತ್ತು ಸ್ವಯಂ ಮೌಲ್ಯಮಾಪನಗಳ ಸರಿಯಾದ ಮತ್ತು ವಿಶ್ವಾಸಾರ್ಹ ಮೌಲ್ಯಮಾಪನ ಸಾಧನಗಳನ್ನು ಹೆಚ್ಚಿಸಿಕೊಂಡು ವಿದ್ಯಾರ್ಥಿಗಳ ಕಲಿಕೆ ಮತ್ತು ತರಗತಿ ಕೋಣೆಯ ಒಟ್ಟಾರೆ ಪ್ರಕ್ರಿಯೆಗಳಲ್ಲಿ ಮೌಲ್ಯಮಾಪನದ ದತ್ತಾಂಶ ಬಳಸಿಕೊಳ್ಳಲು ಈ ಶಿಕ್ಷಣ ಸಹಕಾರಿಯಾಗುತ್ತದೆ ಎಂದು ಹೇಳಿದರು. ಈ ಕಾರ್ಯಕ್ರಮಕ್ಕೆ 2024 ರ ನವೆಂಬರ್ 20 ಆರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ರಶ್ಮಿ ಪ್ರಭಾರ್-8951978091 ಇವರನ್ನು ಸಂಪರ್ಕಿಸುವಂತೆ ತಿಳಿಸಲಾಗಿದೆ.

ತನ್ನದೇ ಮನೆಯಲ್ಲಿ ಕದ್ದ ಯುವತಿ ಸಹಚರ ಈಗ ಪೊಲೀಸರ ಅತಿಥಿಗಳು

ಚನ್ನಗಿರಿ ತಾಲೂಕು ಆಗರಬನ್ನಿಹಟ್ಟಿ ತಸ್ಮೀಯ ಖಾನಂ, ಶಿವಮೊಗ್ಗ ಮೂಲದ ಮುಜೀಬುಲ್ಲಾ ಶೇಖ್ ಬಂಧನ

• **ಕನ್ನಡಪ್ರಭ ವಾರ್ತೆ** ದಾವಣಗೆರೆ

ಪರಿಚಯಸ್ಥನೊಂದಿಗೆ ಸೇರಿ ತನ್ನದೇ ಮನೆಯಲ್ಲಿ ಕಳವು ಕೃತ್ಯ ನಡೆಸಿದ್ದ ಯುವತಿ ಹಾಗೂ ಸಹಚರನನ್ನು ಬಂಧಿಸಿರುವ ಪೊಲೀಸರು, ಸುಮಾರು ₹10.77 ಲಕ್ಷ ಮೌಲ್ಯದ ಸ್ವತ್ತು ವಶಪಡಿಸಿಕೊಂಡಿದ್ದಾರೆ.

ಜಿಲ್ಲೆಯ ಚನ್ನಗಿರಿ ತಾಲೂಕು ಆಗರಬನ್ನಿಹಟ್ಟಿ ಗ್ರಾಮದ ತಸ್ಮೀಯ ಖಾನಂ (26), ಶಿವಮೊಗ್ಗ ಇಲಿಯಾಜ್ ನಗರ ಮೂಲದ ಹಾಲಿ ಬೆಂಗಳೂರು ರಾಜಾಜಿನಗರ ನಿವಾಸಿ ಮುಜೀಬುಲ್ಲಾ ಶೇಖ್ (42) ಬಂಧಿತರು.

- ಮನೆಯಲ್ಲಿ ಕಳವು ನಡೆದಿದೆ ಎಂದು ಚನ್ನಗಿರಿ ಠಾಣೆಗೆ ತಾನೇ ದೂರು ನೀಡಿದ್ದ ತಸ್ಮೀಯ ಖಾನಂ
- ಆರೋಪಿಗಳಿಂದ ₹10.77 ಲಕ್ಷ ಮೌಲ್ಯದ ಚಿನ್ನಾಭರಣ ಹಾಗೂ 1.27 ಲಕ್ಷ ರು. ನಗದು ವಶ
- ಹಣ, ಆಭರಣ ಲಪಟಾಯಿಸಲು ಕುಟುಂಬಕ್ಕೆ ನಿಕಟವರ್ತಿಯಾಗಿದ್ದ ಮುಜೀಬುಲ್ಲಾ ಶೇಖ್ ಜೊತೆ ಸೇರಿ ಕುತಂತ್ರ ಹೆಣೆದಿದ್ದ ಯುವತಿ

ಚನ್ನಗಿರಿ ಪೊಲೀಸರಿಗೆ ದೂರು: ಸೆ.30ರಂದು ಮಧ್ಯಾಹ್ನ ಆಗರಬನ್ನಿಹಟ್ಟಿ ಗ್ರಾಮದ ತನ್ನ ಮನೆಯಲ್ಲಿ ಒಬ್ಬಳೇ ಇದ್ದಾಗ ಯಾರೋ ಪ್ರಜ್ಞೆ ತಪ್ಪಿಸಿ, ಮನೆಯ ಬೀರುವಿನಲ್ಲಿದ್ದ ಸುಮಾರು 170 ಗ್ರಾಂ ಚಿನ್ನಾಭರಣ, ₹1.20 ಲಕ್ಷ ಕಳವು ಮಾಡಿದ್ದಾರೆ ಎಂದು ತಸ್ಮೀಯ ಖಾನಂ ಚನ್ನಗಿರಿ ಪೊಲೀಸ್ ಠಾಣೆಗೆ ಸ್ವತಃ ದೂರು ನೀಡಿದ್ದಳು. ಪ್ರಕರಣ ದಾಖಲಿಸಿ ಹೆಚ್ಚಿನ ತನಿಖೆ ನಡೆಸಿದಾಗ ಪೊಲೀಸರಿಗೆ ತಸ್ಮೀಯ ಖಾನಂ ಕುತಂತ್ರ ಅರಿವಾಗಿದೆ.

ತಸ್ಮೀಯ ಖಾನಂ ಹಣ, ಆಭರಣ ಲಪಟಾಯಿಸಲುತಮ್ಮ ಕುಟುಂಬಕ್ಕೆನಿಕಟವರ್ತಿಯಾಗಿದ್ದ ಮುಜೀಬುಲ್ಲಾ ಶೇಖ್ ಜೊತೆ ಸೇರಿ ಕುತಂತ್ರ ನಡೆಸಿದ್ದಳು. ಮನೆಯಲ್ಲಿ ಚಿನ್ನಾಭರಣ-ನಗದು ಕಳ್ಳರು ಕಳವು ಮಾಡಿದ್ದಾರೆಂಬ ಸುಳ್ಳುಕಥೆ ಯಾರಿಗೂ ಗೊತ್ತಾಗಬಾರದು ಎಂದು ನಾಟಕ ವಾಡಿರುವುದು ವಿಚಾರಣೆ ವೇಳೆ ಪೊಲೀಸರಿಗೆ ತಿಳಿದುಬಂದಿದೆ.

ಆರೋಪಿ ತಸ್ಮೀಯ ಖಾನಂ ಈ ಬಗ್ಗೆ ತಪ್ಪೊಪ್ಪಿಕೊಂಡಿದ್ದಾಳೆ. ಆಕೆ ನೀಡಿದ ಮಾಹಿತಿ ಮೇರೆಗೆ ಪ್ರಕರಣದಲ್ಲಿ ಕಳವು ಮಾಡಿದ್ದ ₹9.5 ಲಕ್ಷ ಬೆಲೆ ಬಾಳುವ 155 ಗ್ರಾಂ ಚಿನ್ನಾಭರಣ ಹಾಗೂ ₹1,27,000 ಹಣವನ್ನು ಮತ್ತೊಬ್ಬ ಆರೋಪಿ ಮುಜೀಬುಲ್ಲಾ ಶೇಖ್‌ನ ಶಿವಮೊಗ್ಗ ಮನೆಯಿಂದ ವಶಪಡಿಸಿಕೊಳ್ಳಲಾಗಿದೆ. ಸದ್ಯಕ್ಕೆ ಈ ಇಬ್ಬರು ಆರೋಪಿಗಳು ನ್ಯಾಯಾಂಗ ಬಂಧನದಲ್ಲಿದ್ದಾರೆ.

ಪ್ರಕರಣದ ಪತ್ತೆಗಾಗಿ ಜಿಲ್ಲಾ ಎಸ್‌ಪಿ ಉಮಾ ಪ್ರಶಾಂತ್, ಎಎಸ್‌ಪಿಗಳಾದ ವಿಜಯಕುಮಾರ್.ಎಂ.ಸಂತೋಷ್, ಜಿ. ಮಂಜುನಾಥ್, ಚನ್ನಗಿರಿ ಡಿವೈಎಸ್‌ಪಿ ಸ್ಯಾಮ್ ವರ್ಗಿಸ್ ಮಾರ್ಗದರ್ಶನದಲ್ಲಿ ಪಿಐ ಬಾಲಚಂದ್ರ ನಾಯ್ಕ ನೇತೃತ್ವದಲ್ಲಿ ಪಿಎಸ್‌ಐಗಳಾದ ಸುರೇಶ್, ಜಗದೀಶ್, ಸಿಬ್ಬಂದಿ ಒಳಗೊಂಡ ತಂಡ ರಚಿಸಲಾಗಿತ್ತು.

ಆಸ್ತಿದಾರರು ಕಡ್ಡಾಯವಾಗಿ ಇ-ಸ್ವತ್ತು ಮಾಡಿಸಿ: ಯತೀಶ್

• **ಕನ್ನಡಪ್ರಭ ವಾರ್ತೆ** ಸಾಗರ

ನಗರಸಭೆ ವ್ಯಾಪ್ತಿಯ ಆಸ್ತಿದಾರರು ಕಡ್ಡಾಯವಾಗಿ ಇ-ಸ್ವತ್ತು ಮಾಡಿಸಬೇಕು. ಸರ್ಕಾರದ ಆದೇಶವನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡುವ ಮೂಲಕ ನಗರಸಭೆ ಆಡಳಿತಕ್ಕೆ ಸಹಕಾರ ನೀಡಬೇಕು ಎಂದು ಉಪವಿಭಾಗಾಧಿಕಾರಿ ಹಾಗೂ ನಗರಸಭೆ ಆಡಳಿತಾಧಿಕಾರಿ ಯತೀಶ್ ಹೇಳಿದರು.ಇಲ್ಲಿನ ನಗರಸಭೆಯಲ್ಲಿ ಇ-ಸ್ವತ್ತು ಕುರಿತು ಪತ್ರಕರ್ತರಿಗೆ ಮಾಹಿತಿ ನೀಡಿದ ಅವರು, ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲ ಆಸ್ತಿದಾರರು ತಮ್ಮ ಸ್ವತ್ತನ್ನು ಇ-ಸ್ವತ್ತು ವ್ಯಾಪ್ತಿಗೆ ತರುವ ಮೂಲಕ ಅಧಿಕೃತಗೊಳಿಸಿಕೊಳ್ಳಬೇಕು. ತಕ್ಷಣ ಖಾತೆದಾರರು ಇ-ಸ್ವತ್ತಿಗೆ ಆರ್ಜಿ ಸಲ್ಲಿಸಬೇಕು ಎಂದು ತಿಳಿಸಿದರು.

ಇ- ಸ್ವತ್ತು ಮಾಡುವುದರಿಂದ ಆಸ್ತಿ ಖರೀದಿ, ಮಾರಾಟ, ಭೋಗ್ಯಕ್ಕೆ ಕೊಡುವುದು, ತೆಗೆದುಕೊಳ್ಳುವುದು, ಬ್ಯಾಂಕಿನಿಂದ ಸಾಲ ಸೌಲಭ್ಯ ಪಡೆಯಲು ಅನುಕೂಲವಾಗುತ್ತದೆ. ರಾಜ್ಯ ಸರ್ಕಾರ ಅ.7ರಿಂದ ಇ-ಸ್ವತ್ತು ಕಡ್ಡಾಯಗೊಳಿಸಿದೆ. ಇ-ಸ್ವತ್ತು ಮಾಡುವುದರಿಂದ ಸರ್ಕಾರಕ್ಕೆ ಆದಾಯ ಹೆಚ್ಚುವ ಜೊತೆಗೆ ತೆರಿಗೆ ವಂಚನೆ ತಪ್ಪಿಸಲು ಸಾಧ್ಯವಿದೆ. ವ್ಯವಸ್ಥಿತವಾಗಿ ಖಾತೆ ಬದಲಾವಣೆಗೆ ಇ-ಸ್ವತ್ತು ಅನುಕೂಲವಾಗಲಿದೆ ಎಂದು ವಿವರಣೆ ನೀಡಿದರು.

ಸಾಗರ ನಗರಸಭೆ ವ್ಯಾಪ್ತಿಯಲ್ಲಿ 23,058 ಖಾತಾ ಆಸ್ತಿ ಇದ್ದು, ಈ ಪೈಕಿ 7,108 ಆಸ್ತಿ ಮಾತ್ರ ಇ-ಸ್ವತ್ತು ಹೊಂದಿದೆ. ಇನ್ನೂ 15ಸಾವಿರಕ್ಕೂ ಹೆಚ್ಚು ಆಸ್ತಿಗಳಿಗೆ ಇ-ಸ್ವತ್ತು ಮಾಡಿಸಿಲ್ಲ. ಕಾವೇರಿ ತಂತ್ರಾಂಶದ ವ್ಯಾಪ್ತಿಗೆ ತರುವ ಮೂಲಕ ಎಲ್ಲರೂ ಇ-ಸ್ವತ್ತು ಮಾಡಿಸಲು ನಗರಸಭೆ ಮತಿಯಿಂದ ದಸರಾ ಹಬ್ಬದ ನಂತರ ಪ್ರತಿ ವಾರ್ಡ್‌ನಲ್ಲೂ ಸಭೆ ನಡೆಸಿ ನಗರಸಭೆ ಕಚೇರಿಯನ್ನು ಮನೆ ಬಾಗಿಲಿಗೆ ತಂದು ಸ್ಥಳದಲ್ಲಿಯೆ ಅರ್ಜಿ ಪಡೆದು ಇ-ಸ್ವತ್ತು ಮಾಡಿಸಲಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪೌರಾಯುಕ್ತ ಎಚ್.ಕೆ.ನಾಗಪ್ಪ, ಉಪ ನೋಂದಣಾಧಿಕಾರಿ ಚೇತನ್, ಕಂದಾಯ ಅಧಿಕಾರಿ ಮಮತಾ, ನಗರಸಭೆ ಅಧಿಕಾರಿಗಳು ಹಾಜರಿದ್ದರು.

ವಾಹನ ಅಡ್ಡಗಟ್ಟಿ ಮೊಬೈಲ್, ಹಣ ದೋಚಿದವರಿಗೆ ಜೈಲು

ಮೂವರು ಆಪರಾಧಿಗಳಿಗೆ 7 ವರ್ಷ ಸಾದಾ ಸೆರೆವಾಸ

ಭದ್ರಾವತಿ ನಗರದ ಬೈಪಾಸ್ ರಸ್ತೆಯಲ್ಲಿ ದ್ವಿಚಕ್ರ ವಾಹನ ಅಡ್ಡಗಟ್ಟಿ ವ್ಯಕ್ತಿಯೊಬ್ಬರನ್ನು ಬೆದರಿಸಿ ನಗದು ಹಣ, ಮೊಬೈಲ್ ದೋಚಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಶಿಕ್ಷೆಗೊಳಗಾಗಿರುವ 3 ಆರೋಪಿಗಳು.

• **ಕನ್ನಡಪ್ರಭ ವಾರ್ತೆ** ಭದ್ರಾವತಿ

ನಗರದ ಬೈಪಾಸ್ ರಸ್ತೆಯಲ್ಲಿ ದ್ವಿಚಕ್ರ ವಾಹನವನ್ನು ಅಡ್ಡಗಟ್ಟಿ ವ್ಯಕ್ತಿಯೊಬ್ಬರನ್ನು ಬೆದರಿಸಿ ನಗದು ಹಣ, ಮೊಬೈಲ್ ದೋಚಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಆಪರಾಧಿಗಳಿಗೆ 7 ವರ್ಷ 1 ತಿಂಗಳು ಸಾದಾ ಸೆರೆವಾಸ ಶಿಕ್ಷೆ ವಿಧಿಸಿ 4ನೇ ಹೆಚ್ಚುವರಿ ಜಿಲ್ಲಾಮತ್ತು ಸತ್ರ ನ್ಯಾಯಾಲಯ ಆದೇಶಿಸಿದೆ. ಶಿವಮೊಗ್ಗ ನಗರದ ನಿವಾಸಿಗಳಾದ ಸಯ್ಯದ್ ಇಬ್ರಾಹಿಂ ಅಲಿಯಾಸ್ ರಹೀಲ್(23), ಮೊಹಮ್ಮದ್ ಮುಸ್ತಫಾ (22) ಮತ್ತು ಮೊಹಮ್ಮದ್ ಅಲ್ಲಾಭಕ್ಷಿ (22) ಶಿಕ್ಷೆಗೊಳಗಾದ ಆಪರಾಧಿಗಳು. ಅನ್ವರ್ ಕಾಲೋನಿಯ ನಿವಾಸಿ ಮೊಹಮ್ಮದ್ ಖಾಲೀದ್ (21) ಬೈಪಾಸ್ ರಸ್ತೆಯಲ್ಲಿ ದ್ವಿಚಕ್ರ ವಾಹನದಲ್ಲಿ ಸಂಚರಿಸುತ್ತಿದ್ದಾಗ ತಡೆದು ಅಡ್ಡಗಟ್ಟಿ ಬೆದರಿಕೆ ಹಾಕಿ ನಗದು ಹಣ, ಮೊಬೈಲ್ ಮತ್ತು ವಾಚ್ ಕಿತ್ತು ಕೊಂಡು ಪರಾರಿಯಾಗಿದ್ದರು. ನ್ಯೂಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆಂದಿನ ಪೊಲೀಸ್ ನಗರ ವೃತ್ತ ನಿರೀಕ್ಷಕ ರಾಘವೇಂದ್ರ ಕಾಂಡಿಕೆ ತನಿಖಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದರು.

ತನಿಖೆ ನಡೆಸಿ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಲಾಗಿತ್ತು. 4ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಇಂದಿರಾ ಮೈಲಸ್ವಾಮಿ ಚೆಟ್ಟಿಯಾರ್‌ರವರು ವಿಚಾರಣೆ ನಡೆಸಿ ಆರೋಪ ದೃಢಪಟ್ಟ ಹಿನ್ನೆಲೆಯಲ್ಲಿ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕಿ ಪಿ.ರತ್ನಮ್ಮ ಪ್ರಕರಣದಲ್ಲಿ ವಾದ ಮಂಡಿಸಿದ್ದರು.

ಹೊಟ್ಟೆ ನೋವಿಂದ ಬಳಲುತ್ತಿದ್ದ ಮಹಿಳೆಯಲ್ಲಿ 10 ಕೆಜಿ ಅಂಡಾಶಯ

ಶಸ್ತ್ರ ಚಿಕಿತ್ಸೆ ಮೂಲಕ ಹೊರತೆಗೆದ ಸಾರ್ವಜನಿಕ ಆಸ್ಪತ್ರೆ ವೈದ್ಯರು

• **ಕನ್ನಡಪ್ರಭ ವಾರ್ತೆ** ಶಿಕಾರಿಪುರ

ಹೊಟ್ಟೆ ನೋವಿನಿಂದ ಬಳಲುತ್ತಿದ್ದ ಮಹಿಳೆಯ ಹೊಟ್ಟೆಯಿಂದ ಅಂದಾಜು 10 ಕೆಜಿ ತೂಕದ ಅಂಡಾಶಯ ಗಡ್ಡೆಯನ್ನು ಯಶಸ್ವಿ ಶಸ್ತ್ರ ಚಿಕಿತ್ಸೆ ಮೂಲಕ ಹೊರತೆಗೆದು ಇಲ್ಲಿನ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ವೈದ್ಯರು ಚಾಕಚಕ್ಯತೆಯನ್ನು ತೋರಿದ್ದಾರೆ.

ತಾಲೂಕಿನ ವಿಠ್ಠಲನಗರ ಗ್ರಾಮದ ಶಾಂತಮ್ಮ (65) ಎಂಬ ಮಹಿಳೆ ಕಳೆದ ಹಲವು ದಿನಗಳಿಂದ ಹೊಟ್ಟೆ ನೋವಿನಿಂದ ಬಳಲುತ್ತಿದ್ದು, ನೋವು ಸಹಿಸಲಾಗದೆ ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಚಿಕಿತ್ಸೆಗಾಗಿ ಆಗಮಿಸಿದಾಗ ಹೊಟ್ಟೆ ಊತದಿಂದ ಬಳಲುತ್ತಿದ್ದನ್ನು ಗಮನಿಸಿದ ಹಿರಿಯ ಶಸ್ತ್ರ ಚಿಕಿತ್ಸಾ ತಜ್ಞ ವೈದ್ಯ ಡಾ.ಶ್ರೀನಿವಾಸ್ ನೇತೃತ್ವದಲ್ಲಿ ಸತತ 4 ಗಂಟೆಯ ನಿರಂತರ ಶಸ್ತ್ರ ಚಿಕಿತ್ಸೆ ನಂತರದಲ್ಲಿ ಆಂದಾಜು 10 ಕೆಜಿ ತೂಕದ ದೊಡ್ಡ ಗಾತ್ರದ ಓವರಿ (ಅಂಡಾಶಯ) ಗಡ್ಡೆಯನ್ನು ಹೊರ ತೆಗೆದಿದ್ದಾರೆ. ಇದೀಗ ಮಹಿಳೆ ಆರೋಗ್ಯದಲ್ಲಿ ಚೇತರಿಕೆ ಕಂಡುಬಂದಿದ